# ಕರ್ನಾಟಕ ವಿಧಾನಸಭೆ

## ಹದಿನೈದನೇ ವಿಧಾನಸಭೆ

()

## ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಪಟ್ಟಿ

----

[ಸಾರಿಗೆ ಸಚಿವರು - ಕೃಷಿ ಸಚಿವರು - ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು - ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರುಹಾಗೂ ಸಮಾಜ ಕಲ್ಯಾಣ ಸಚಿವರು ].

ಒಟ್ಟು ಪ್ರಶ್ನೆಗಳು 13

----

15/10/1

### ಕುಡಿಯುವ ನೀರಿನ ವ್ಯವಸ್ಥೆ

***1 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ)201920ನೇ ಸಾಲಿನಲ್ಲಿ ಆನೇಕಲ್ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿಗಾಗಿ ಕೊಳವೆ ಬಾವಿಗಳನ್ನು ಕೊರೆಯಲು ನಿಗದಿಪಡಿಸಿರುವ ಅನುದಾನವೆಷ್ಟು; (ವಿವರ ನೀಡುವುದು) ಆ) ಈ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಅಭಾವ ಎದುರಿಸುತ್ತಿರುವ ಗ್ರಾಮಗಳಾವುವು; (ವಿವರ ನೀಡುವುದು) ಇ) ಪ್ರಸ್ತುತ ವರ್ಷದಲ್ಲಿ ಕುಡಿಯುವ ನೀರಿನ ಪೂರೈಕೆಗಾಗಿ ಕೊರೆದಿರುವ ಕೊಳವೆ ಬಾವಿಗಳೆಷ್ಟು? (ಗ್ರಾಮವಾರು ವಿವರ ನೀಡುವುದು)

----

15/10/2

### ಜಲಧಾರೆ ಯೋಜನೆ

***2 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ) ವಿಜಯಪುರ ಜಿಲ್ಲೆಯಲ್ಲಿ ಜಲಧಾರೆ ಯೋಜನೆಯನ್ನು ಅನುಷ್ಠಾನಗೊಳಿಸಲು ಇದುವರೆವಿಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಆ) ಈ ಜಲಧಾರೆ ಯೋಜನೆಯನ್ನು ಅನುಷ್ಠಾನಗೊಳಿಸಲು ತಗಲುವ ಅಂದಾಜು ವೆಚ್ಚವೆಷ್ಟು; ಇ) ಸದರಿ ಯೋಜನೆಯನ್ನು ಕಾರ್ಯರೂಪಗೊಳಿಸುವುದಕ್ಕಾಗಿ ಸರ್ಕಾರ ಹಾಕಿಕೊಂಡಿರುವ ಕಾಲಮಿತಿಯೇನು?

----

15/10/3

## ಮಳೆ ಮಾಪನ ಕಾರ್ಯ ನಿರ್ವಹಣೆ

***3 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಕೃಷಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ) ಗ್ರಾಮ ಪಂಚಾಯತಿ ಹಂತದಲ್ಲಿ ಅಳವಡಿಸಿರುವ ಮಳೆಮಾಪನವು ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಇದರಿಂದ ದತ್ತಾಂಶ ಸಂಗ್ರಹಣೆಯಲ್ಲಿ ವ್ಯತ್ಯಾಸವಾಗುತ್ತಿರುವುದರಿಂದ ರೈತರಿಗೆ ಬೆಳೆ ವಿಮೆ ಮಂಜೂರು ಮಾಡಲು ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇ) ಸದರಿ ಮಳೆ ಮಾಪನಗಳನ್ನು ವೆಬ್‌ಸೈಟ್‌ನಲ್ಲಿ ಅಳವಡಿಸಿ ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಈ) ವೆಬ್‌ಸೈಟ್‌ನಲ್ಲಿ ದತ್ತಾಂಶ ವೀಕ್ಷಣೆಗೆ ಅವಕಾಶ ಒದಗಿಸಲು ಇರುವ ತೊಂದರೆಗಳೇನು ಹಾಗೂ ಈ ಬಗ್ಗೆ ಕೈಗೊಂಡ ಕ್ರಮಗಳೇನು? (ಪೂರ್ಣ ವಿವರ ಒದಗಿಸುವುದು)

\- - - -

15/10/4

## ಇಂದಿರಾಗಾಂಧಿ ವಸತಿ ಶಾಲೆ ನಿರ್ಮಾಣ

***4 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಸಮಾಜ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ) ಕುಣಿಗಲ್ ವಿಧಾನಸಭಾ ಕ್ಷೇತ್ರದಲ್ಲಿ ಹಿಂದುಳಿದ ವರ್ಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸವಾಗಿರುವುದರಿಂದ ಸದರಿ ವರ್ಗದ ಮಕ್ಕಳ ವಿದ್ಯಾಭ್ಯಾಸಕ್ಕೆ ಅಲ್ಲಿನ ಶಾಲೆಗಳಲ್ಲಿ ಯಾವುದೇ ರೀತಿಯ ಮೂಲಭೂತ ಸೌಲಭ್ಯಗಳಿಲ್ಲದೇ ಇರುವುದರಿಂದ ಈ ಭಾಗದಲ್ಲಿ ವಸತಿ ಶಾಲೆಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕಿದೆಯೇ; ಆ) ಹಾಗಿದ್ದಲ್ಲಿ, ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ನಿಟ್ಟಿನಲ್ಲಿ ಕುಣಿಗಲ್ ತಾಲ್ಲೂಕಿನ ಕೊತ್ತಗೆರೆ ಹೋಬಳಿಯ ಸೋಳೆಕುಪ್ಪ ಗ್ರಾಮದ ಸರ್ವೆ ನಂಬರ್ 71ರಲ್ಲಿ 7 ಎಕರೆ ಜಾಗವನ್ನು ಇಂದಿರಾಗಾಂಧಿ ವಸತಿ ಶಾಲೆಗೆ ಮಂಜೂರಾಗಿದ್ದು, ಕಟ್ಟಡ ನಿರ್ಮಾಣಕ್ಕಾಗಿ ಬಿಡುಗಡೆಯಾಗಿರುವ ಅನುದಾನವನ್ನು ಕಟ್ಟಡ ಕಾಮಗಾರಿಗೆ ಟೆಂಡರ್ ಕರೆಯುವ ಹಂತದಲ್ಲಿ ಹಿಂಪಡೆಯಲು ಕಾರಣಗಳೇನು; ಇ) ಈ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಸಂಬಂಧ ಇಂದಿರಾಗಾಂಧಿ ವಸತಿ ಶಾಲೆಯನ್ನು ಪ್ರಾರಂಭಿಸುವ ಅವಶ್ಯಕತೆ ಇದ್ದು, ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಕಟ್ಟಡ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

\- - - -

15/10/5

## ಬಸ್ ನಿಲ್ದಾಣದಲ್ಲಿ ಕಾಂಕ್ರಿಟ್ ರಸ್ತೆ ನಿರ್ಮಾಣ

***5 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಸಾರಿಗೆ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿರುವ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದಲ್ಲಿ ಕಾಂಕ್ರಿಟ್ ರಸ್ತೆ ಇಲ್ಲದೇ ಇರುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಸದರಿ ನಿಲ್ದಾಣದಲ್ಲಿ ಕಪ್ಪು ಮಿಶ್ರಿತ ಮಣ್ಣು ಇರುವುದರಿಂದ ತಗ್ಗು ಗುಂಡಿಗಳು

ಬೀಳುತ್ತಿದ್ದು, ಸಾಕಷ್ಟು ನೀರು ನಿಂತು, ಬಸ್ ನಿಲ್ದಾಣ ಹಾಳಾಗುತ್ತಿರುವುದು ಸಹ ಸರ್ಕಾರದ ಗಮನಕ್ಕೆ ಬಂದಿದೆಯೇ; ಇ) ಈ ಬಸ್ ನಿಲ್ದಾಣದಲ್ಲಿ ಕಾಂಕ್ರಿಟ್ ರಸ್ತೆ ನಿರ್ಮಾಣ ಮಾಡಲು ಬೇಕಾಗುವ ಹಣವೆಷ್ಟು; ಈ) ಸದರಿ ಕಾಂಕ್ರಿಟ್ ರಸ್ತೆ ನಿರ್ಮಾಣ ಮಾಡಲು ಸರ್ಕಾರ ಅಗತ್ಯವಿರುವ ಹಣ ಬಿಡುಗಡೆ ಮಾಡುವುದೇ?

----

15/10/8

## ಬೆಳೆ ಹಾನಿಗೆ ಪರಿಹಾರ

***6 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಕೃಷಿ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ) ರಾಜ್ಯದ ರೈತರಿಗೆ ಯೂರಿಯಾ ಹಾಗೂ ಇತರೆ ರಸಗೊಬ್ಬರಗಳ ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಆ) ಉತ್ತರ ಕರ್ನಾಟಕ ಜಿಲ್ಲೆಗಳ ರೈತರು ಬಿತ್ತನೆ ಮಾಡಿರುವ ಜೇವರ್ಗಿ ತಾಲ್ಲೂಕು ಸೇರಿ ಇತರೆ ತಾಲ್ಲೂಕುವಾರು ಹಾಗೂ ರೈತರಿಗೆ ಬೆಳೆ ಹಾನಿಯಾಗಿರುವ ಪ್ರಮಾಣವೆಷ್ಟು; (ವಿವರ ನೀಡುವುದು) ಇ) ಬೆಳೆ ಹಾನಿ ಪರಿಹಾರ ಮಂಜೂರಾದ ಫಲಾನುಭವಿಗಳೆಷ್ಟು; ಪರಿಹಾರ ವಿತರಣೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

----

15/10/9

## ಅಂಬೇಡ್ಕರ್ ಭವನ ನಿರ್ಮಾಣ

***7 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಸಮಾಜ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ) ಅರಕಲಗೂಡು ತಾಲ್ಲೂಕು ಕೇಂದ್ರದಲ್ಲಿ ಅಂಬೇಡ್ಕರ್ ಭವನದ ನಿರ್ಮಾಣ ಕಾಮಗಾರಿಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಬಂದಿದ್ದಲ್ಲಿ, ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಮತ್ತು ಯಾವ ಕಾಲ ಮಿತಿಯೊಳಗೆ ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು?

----

15/10/10

## ಟಿಎಸ್‌ಪಿ ಯೋಜನೆಯಲ್ಲಿ ಅನುದಾನ

***8 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಸಮಾಜ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ : - ಅ) ಪಿರಿಯಾಪಟ್ಟಣ ಮತಕ್ಷೇತ್ರದಲ್ಲಿರುವ 38 ಬುಡಕಟ್ಟು, ಹಾಡಿ ಕಾಲೋನಿಗಳು ಹಾಗೂ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಿರುವ 06 ಹಾಡಿಗಳಿಗೆ ಸಂಪರ್ಕ ರಸ್ತೆಗಳು ಹಾಗೂ ಮೂಲಭೂತ ಸೌಕರ್ಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) 202122ನೇ ಸಾಲಿನಲ್ಲಿ ಸದರಿ ಮತ ಕ್ಷೇತ್ರಕ್ಕೆ ಟಿಎಸ್‌ಪಿ ಯೋಜನೆಯ ಅಡಿಯಲ್ಲಿ ಬುಡಕಟ್ಟು ಹಾಗೂ ಹಾಡಿಗಳ ಗಿರಿಜನ ಕಾಲೋನಿಗಳಿಗೆ ರಸ್ತೆ ಹಾಗೂ ಮೂಲಭೂತ ಸೌಕರ್ಯ ನಿರ್ಮಿಸಲು ಅನುದಾನ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇ) ಹಾಗಿದ್ದಲ್ಲಿ, ಈ ಯೋಜನೆ ಅಡಿಯಲ್ಲಿ ಮಂಜೂರು ಮಾಡಲಾಗುವ ಅನುದಾನವೆಷ್ಟು? (ವಿವರ ನೀಡುವುದು)

----

15/10/11

**ಸಾರಿಗೆ ಡಿಪೋ ಮಂಜೂರಾತಿ**

***9 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಸಾರಿಗೆ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **:** - ಅ) ನಂಜುಂಡಪ್ಪ ವರದಿಯ ಪ್ರಕಾರ ಹಿಂದುಳಿದ ತಾಲ್ಲೂಕಾಗಿರುವ ಸೊರಬ ತಾಲ್ಲೂಕಿನ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಸಾರಿಗೆ ಡಿಪೋ ಹಾಗೂ ಸಾರಿಗೆ ನೌಕರರ ವಸತಿ ನಿಲಯಗಳ ನಿರ್ಮಾಣಕ್ಕಾಗಿ 9 ಎಕರೆ ಭೂಮಿಯನ್ನು ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಬಂದಿದ್ದಲ್ಲಿ, ಸದರಿ ಡಿಪೋ ನಿರ್ಮಾಣ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

----

15/10/12

**ಒಲಂಪಿಕ್ಸ್ ಮತ್ತು ಪ್ಯಾರಾಲಿಂಪಿಕ್ಸ್ ವಿಜೇತರು**

***10 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **:** - ಅ) 2021ರಲ್ಲಿ ಒಲಂಪಿಕ್ಸ್ ಮತ್ತು ಪ್ಯಾರಾಲಿಂಪಿಕ್ಸ್‌ನಲ್ಲಿ ಭಾಗವಹಿಸಿ ಪದಕ ಪಡೆದ ಸ್ಪರ್ಧಿಗಳಿಗೆ ರಾಜ್ಯ ಸರ್ಕಾರದಿಂದ ಸನ್ಮಾನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಈ ಪದಕ ವಿಜೇತರಿಗೆ ಸರ್ಕಾರ ನೀಡಲು ಉದ್ದೇಶಿಸಿರುವ ಬಹುಮಾನದ ಮೊತ್ತ ಮತ್ತು ಇತರೆ ಸೌಲಭ್ಯಗಳೇನು; ಯಾವಾಗ ನೀಡಲಾಗುವುದು; ಆ) ರಾಜ್ಯದಿಂದ 2021ರಲ್ಲಿ ಒಲಂಪಿಕ್ಸ್ ಮತ್ತು ಪ್ಯಾರಾಲಿಂಪಿಕ್ಸ್‌ನಲ್ಲಿ ಭಾಗವಹಿಸಲು ತೆರಳಿದ್ದ ಕ್ರೀಡಾಪಟುಗಳಿಗೆ ಸರ್ಕಾರ ನೀಡಿರುವ ಸವಲತ್ತುಗಳೇನು? (ವಿವರ ನೀಡುವುದು)

----

15/10/13

**ರಸ್ತೆ ದುರಸ್ತಿ ಮತ್ತು ಹುದ್ದೆಗಳ ಭರ್ತಿ**

***11 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **:** - ಅ) ಪುತ್ತೂರು ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗೊಳಗಾದ ರಸ್ತೆಗಳನ್ನು ಮರು ದುರಸ್ತಿ ಮಾಡಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ನೀಡುವುದು) ಆ) ಪುತ್ತೂರು ತಾಲ್ಲೂಕು ಪಂಚಾಯತ್‌ನಲ್ಲಿ ಒಟ್ಟು ಮಂಜೂರಾದ ಹುದ್ದೆಗಳೆಷ್ಟು; ಪ್ರಸ್ತುತ ಖಾಲಿಯಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

----

15/10/14

**ವಸತಿ ನಿಲಯಗಳು**

***12 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಸಮಾಜ ಕಲ್ಯಾಣ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **:** - ಅ) ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ವಸತಿ ನಿಲಯಗಳು ಎಷ್ಟು; ಅವುಗಳು ಯಾವುವು; (ಸಂಪೂರ್ಣ ವಿವರ ನೀಡುವುದು) ಆ) ಸದರಿ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; ಎಷ್ಟು ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ; (ಸಂಪೂರ್ಣ ವಿವರ ನೀಡುವುದು) ಇ) 201920 ಮತ್ತು 202021ನೇ ಸಾಲಿನಲ್ಲಿ ಚಾಮರಾಜನಗರ ಜಿಲ್ಲೆಗೆ SCSPTSP ಯೋಜನೆಯ ಅಡಿಯಲ್ಲಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನವನ್ನು ಮಂಜೂರು ಮಾಡಲಾಗಿದೆ ಹಾಗೂ ತಡೆಹಿಡಿಯಲಾಗಿದೆ; (ವಿವರ ನೀಡುವುದು) ಈ) ಹಾಗಿದ್ದಲ್ಲಿ, ಮಂಜೂರು ಮಾಡಲಾದ ಹಾಗೂ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು) ಉ) 201819ನೇ ಸಾಲಿನಲ್ಲಿ ಇಲಾಖೆಯ ವತಿಯಿಂದ ತಡೆಹಿಡಿಯಲಾಗಿರುವ SCSPTSP ಒಟ್ಟು ಅನುದಾನವೆಷ್ಟು; ಯಾವ ಮತಕ್ಷೇತ್ರಗಳಲ್ಲಿ ತಡೆಹಿಡಿಯಲಾಗಿದೆ? (ವಿವರ ನೀಡುವುದು)

\- - - -

15/10/16

**ಬಹು ಗ್ರಾಮ ಕುಡಿಯುವ ನೀರಿನ ಯೋಜನೆ**

***13 ರಿಜ್ವಾನ್ ಅರ್ಷದ್ (ಶಿವಾಜಿನಗರ):**

ಮಾನ್ಯ **ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು** ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ **:** - ಅ) ಚಾಮರಾಜನಗರ ಜಿಲ್ಲೆಯ ಹನೂರು ವಿಧಾನ ಸಭಾ ಕ್ಷೇತ್ರದ ಹನೂರು ತಾಲ್ಲೂಕಿನಲ್ಲಿ ಬಹು ಗ್ರಾಮ ಕುಡಿಯುವ ನೀರಿನ ಮೊದಲ ಹಂತದ ಯೋಜನಾ ಕಾಮಗಾರಿಯು ಮುಕ್ತಾಯದ ಹಂತಕ್ಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಬಂದಿದ್ದಲ್ಲಿ, ಎರಡನೇ ಹಂತದ ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಪಟ್ಟಿಯಲ್ಲಿರುವ ಗ್ರಾಮಗಳಲ್ಲಿ ತೀವ್ರ ನೀರಿನ ಅಭಾವವಿರುವುದರಿಂದ ಈ ಯೋಜನೆಯನ್ನು ಸರ್ಕಾರ ಎಂದಿನಿಂದ ಕೈಗೆತ್ತಿಕೊಳ್ಳುವುದು? (ವಿವರ ನೀಡುವುದು)

\- - - -